ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 31-03-2021 ಪ್ರಶ್ನೆ ಸಂಖ್ಯೆ : 357 (2484)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 31-03-2021

ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಸಚಿವರು

ವಿಷಯ : ಸಮಾಜ ಕಲ್ಯಾಣ ಇಲಾಖೆಯ ಅಧೀನದ ನಿಗಮ/ಮಂಡಳಿಗಳಲ್ಲಿ ಖಾಲಿಯಿರುವ ಹುದ್ದೆಗಳ ನೇಮಕಾತಿ ಕುರಿತು

(ಅ) ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ಎಷ್ಟು ನಿಗಮ/ಮಂಡಳಿಗಳು ಕಾರ್ಯನಿರ್ವಹಿಸುತ್ತಿವೆ; ಸದರಿ ನಿಗಮ/ಮಂಡಳಿಗಳಲ್ಲಿ ಒಟ್ಟು ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು; (ವೃಂದವಾರು ವಿವರ ನೀಡುವುದು)

(ಆ) ಅವುಗಳಲ್ಲಿ ಖಾಯಂ, ಗುತ್ತಿಗೆ ಆಧಾರದ ಮೇಲೆ ಮತ್ತು ದಿನಗೂಲಿ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು;

(ಇ) ಪ್ರಸ್ತುತ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು; (ವೃಂದವಾರು ವಿವರ ನೀಡುವುದು)

(ಈ) ಖಾಲಿಯಿರುವ ಹುದ್ದೆಗಳನ್ನು ನೇಮಕ ಮಾಡಲು ಕ್ರಮ ಕೈಗೊಳ್ಳಲಾಗಿದೆಯೇ; ಕೈಗೊಂಡಿದ್ದಲ್ಲಿ, ಸದರಿ ನೇಮಕಾತಿ ಪ್ರಕ್ರಿಯೆಗಳು ಪ್ರಸ್ತುತ ಯಾವ ಹಂತದಲ್ಲಿವೆ; ಯಾವ ಕಾಲಮಿತಿಯಲ್ಲಿ ನೇಮಕಾತಿ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲಾಗುವುದು;

(ಉ) ಇಲ್ಲವಾದಲ್ಲಿ, ನೇಮಕಾತಿ ಮಾಡಿಕೊಳ್ಳದಿರಲು ಕಾರಣಗಳೇನು?